<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ,</u>
<u>ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು</u>

**Spl. C. No. 786/2025**

| ಸಾಕ್ಷಿಯ ಹೆಸರು | ಶ್ರೀ. ಹನಮಂತಪ್ಪ | ಚಾಸಾಃ | ಫ್ರಾಸಾಃ |
|---|---|---|---|
| ತಂದೆಯ ಹೆಸರು | ಗುರಪ್ಪ | 11 | 5 |
| ವಯಸ್ಸು | 65 ವರ್ಷ | ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು. ದಿನಾಂಕ **12.08.2026.** | |
| ಉದ್ಯೋಗ | ನಿವೃತ್ತ ASI | | |
| ವಾಸ ಸ್ಥಳ | ಹೇರೋಹಳ್ಳಿ | | |

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

ನಾನು 10.02.2017 ರಿಂದ 30.05.2022 ರವರೆಗೆ ಮಾದನಾಯಕನಹಳ್ಳಿ ಪೋಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಠಾಣೆಯಲ್ಲಿ ಕೆಲಸ ನಿರ್ವಹಿಸಿದ್ದೇನೆ. ದಿನಾಂಕ 23.12.2017 ರಂದು ನಾನು ಠಾಣಾ ಪ್ರಭಾರದಲ್ಲಿ ಇದ್ದಾಗ ಬೆಳಗ್ಗೆ 11.30 ಗಂಟೆ ಸಮಯದಲ್ಲಿ ಚಾಸಾ. 1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ಪಿರ್ಯಾದನ್ನು ಪಡೆದು ಅದರ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ 600/2017 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ.ವ. ಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ನಾನು ಸ್ವೀಕರಿಸಿದ ದೂರನ್ನು ಈಗ ನೋಡುತ್ತಿದ್ದು ಈಗಾಗಲೇ ನಿಶಾನೆ.ಪಿ. 1 ಎಂದು ಗುರುತಿಸಿದ್ದು ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 1 (ಬಿ) ಎಂದು ಗುರುತಿಸಲಾಯಿತು. ಪ್ರ.ವ.ವ. ಅನ್ನು ನಿಶಾನೆ.ಪಿ. 9 ಎಂತಲೂ ಸಾಕ್ಷಿಯ ಸಹಿಯನ್ನು ನಿಶಾನೆ.ಪಿ. 9 (ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಗಾಗಿ ಚಾಸಾ. 12 ರವರಿಗೆ ಕಡತವನ್ನು ನಿವೇದಿಸಿಕೊಂಡಿದ್ದೇನೆ.

ಪಾಟೀ ಸವಾಲುಃ ಆರೋಪಿತರ ಪರ ಶ್ರೀ. **TS** ವಕೀಲರಿಂದ :

ಚಾಸಾ. 1 ರವರು ದೂರನ್ನು ಬರೆದುಕೊಂಡು ಬಂದಿರಲ್ಲಿ ಎಂದರೆ ಗೊತ್ತಿಲ್ಲ. ಚಾಸಾ. 1 ರವರು ಠಾಣೆಗೆ ಬಂದು ದೂರು ನೀಡಿಲ್ಲ ಮತ್ತು ನಾನು ಸುಳ್ಳು ದೂರನ್ನು ಸೃಷ್ಟಿಸಿದ್ದೇನೆ ಎಂದರೆ ಸರಿ ಅಲ್ಲ. ಮೇಲಾಧಿಕಾರಿಗಳ ಮಾತನ್ನು ಕೇಳಿ ಸುಳ್ಳು ಪ್ರ.ವ.ವ. ದಾಖಲು ಮಾಡಿದ್ದೇನೆ ಎಂದರೆ ಸರಿ ಅಲ್ಲ.

**Spl. C. No. 786/2025**

<u>ಮರು ವಿಚಾರಣೆ ಇಲ್ಲ</u>

(ಈ ಸಾಕ್ಷಿದಾರರನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ವಿಚಾರಣೆ ಮಾಡಿದ್ದು ಅದನ್ನು ಯಥಾವತ್ತಾಗಿ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ ಇದೆ,

**(ಶ್ರೀಮತಿ. ಬಿ.ಎಸ್.ರೇಖಾ )**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.